ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	791
ಮಾನ್ಯ ಸದಸ್ಯರ ಹೆಸರು	ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು	ಉನ್ನತ ಶಿಕ್ಷಣ ಸಚಿವರು
ಉತ್ತರಿಸಬೇಕಾದ ದಿನಾಂಕ	20.12.2021

	ಪ್ರಶ್ನೆ	ಉತ್ತರ
(ಅ)	ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರನ್ನು 2021-22ನೇ ಸಾಲಿಗೆ ಮುಂದುವರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಕೋವಿಡ್-19 ಸಾಂಕ್ರಾಮಿಕ ರೋಗದ ಪ್ರಸರಣೆಯಿಂದ ಉಂಟಾಗಿರುವ ವಿಷಮ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ 2020-21ನೇ ಸಾಲಿನಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರುಗಳನ್ನು ಒಂದು ದಿನದ ಮಟ್ಟಿಗೆ ಬಿಡುಗಡೆಗೊಳಿಸಿ, 2021-22ನೇ ಶೈಕ್ಷಣಿಕ ಸಾಲಿಗೂ ಮುಂದುವರೆಸಲು ಸರ್ಕಾರದ ಪತ್ರ ಸಂಖ್ಯೆ: 269 ಯುಎನ್ಇ 2020, ದಿನಾಂಕ: 22.10.2021ರ ಪತ್ರದಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಅದರಂತೆ, ಮಂಡ್ಯ ವಿಶ್ವವಿದ್ಯಾಲಯವನ್ನು ಹೊರತುಪಡಿಸಿ ಉಳಿದ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.
(ಆ)	ಎಲ್ಲಾ ವಿಶ್ವವಿದ್ಯಾನಿಲಯಗಳ ಅತಿಥಿ ಉಪನ್ಯಾಸಕರು ಕರ್ತವ್ಯಕ್ಕೆ ವರದಿ ಮಾಡಿಕೊಂಡಿದ್ದಾರೆಯೇ; (ಮಾಹಿತಿ ನೀಡುವುದು)	
(ಇ)	ಮಂಡ್ಯ ವಿಶ್ವವಿದ್ಯಾನಿಲಯದಲ್ಲಿನ ಅತಿಥಿ ಉಪನ್ಯಾಸಕರನ್ನು ಕರ್ತವ್ಯಕ್ಕೆ ವರದಿ ಮಾಡಿಕೊಂಡಿಲ್ಲದಿರುವುದಕ್ಕೆ ಕಾರಣಗಳೇನು;	ಮಂಡ್ಯ ವಿಶ್ವವಿದ್ಯಾನಿಲಯದಲ್ಲಿನ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಹಿಂದಿನ ವಿಶೇಷಾಧಿಕಾರಿಗಳು ನಿಯಮಗಳನ್ನು ಪಾಲಿಸಿರುವುದಿಲ್ಲವೆಂಬ ಕಾರಣದಿಂದ ಅವರುಗಳನ್ನು 2021-22ನೇ ಶೈಕ್ಷಣಿಕ ಸಾಲಿಗೆ ಮುಂದುವರೆಸಿರುವುದಿಲ್ಲ.
(ಈ)	ಈ ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕರಿಗೆ 2 ವರ್ಷಗಳಿಂದ ವೇತನ ನೀಡದಿರಲು ಕಾರಣಗಳೇನು;	2019-20ನೇ ಸಾಲಿನಲ್ಲಿ ನೇಮಕಗೊಂಡಿದ್ದ ಅತಿಥಿ ಉಪನ್ಯಾಸಕರುಗಳಿಗೆ ಸೆಪ್ಟೆಂಬರ್-2019 ರಿಂದ ಸೆಪ್ಟೆಂಬರ್-2021 ರವರೆಗೆ ವೇತನವನ್ನು ಪಾವತಿಸಲಾಗಿರುತ್ತದೆ.
(ಉ)	ಮಂಡ್ಯ ವಿಶ್ವವಿದ್ಯಾನಿಲಯ ಕುಲಸಚಿವರನ್ನು ನೇಮಕ ಮಾಡುವಾಗ ಯಾವ ಮಾನದಂಡ ಅನುಸರಿಸಲಾಗಿದೆ ಯುಜಿಸಿ ಮಾನದಂಡಗಳನ್ನು ಪರಿಗಣಿಸಲಾಗಿದೆಯೇ; (ಮಾಹಿತಿ ನೀಡುವುದು)	ಮಂಡ್ಯ ವಿಶ್ವವಿದ್ಯಾಲಯದಲ್ಲಿ ಆಡಳಿತ ನಿರ್ವಹಣೆ, ಪ್ರವೇಶಾತಿ ಕಾರ್ಯ ಚಟುವಟಿಕೆ, ಪರೀಕ್ಷಾ ಕಾರ್ಯಗಳ ನಿರ್ವಹಣೆಯನ್ನು ನಿರ್ವಹಿಸಲು ಅನುವಾಗುವಂತೆ ಹಂಗಾಮಿಯಾಗಿ ಸೇವಾಹಿರಿತನದ

		ಆಧಾರದ ಮೇಲೆ ಸರ್ಕಾರದಿಂದ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಸಂಗತ ಉಪಬಂಧಗಳನುಸಾರ ನೇಮಕಾತಿ ಮಾಡುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಕುಲಸಚಿವರು (ಆಡಳಿತ) ಹುದ್ದೆಗೆ ನೇಮಿಸಲಾಗಿರುತ್ತದೆ.

ಇಡಿ 350 ಯುಎನ್ಇ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐಟಿ ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು